ಕರ್ನಾಟಕ ಸರ್ಕಾರ

ಸಂಖ್ಯೆ : ಆಇ 263 ವೆಚ್ಚ-12/2022

ಕರ್ನಾಟಕ ಸರ್ಕಾರದ ಸಚಿವಾಲಯ
ಆರ್ಥಿಕ ಇಲಾಖೆ
ಬೆಂಗಳೂರು, ದಿನಾಂಕ:11.05.2022

## ಸುತ್ತೋಲೆ

ವಿಷಯ : ಕಾಮಗಾರಿಗಳ ಟೆಂಡರ್ ಪ್ರಕ್ರಿಯೆ ಮತ್ತು ಬಿಲ್ಲುಗಳ ಪಾವತಿಗೆ ಸಂಬಂಧಿಸಿದಂತೆ ಸೂಚನೆಗಳನ್ನು ನೀಡುವ ಕುರಿತು.

ಉಲ್ಲೇಖ :
(1) ಸುತ್ತೋಲೆ ಸಂ:PWD 1359 SO/FC/2001, ದಿನಾಂಕ:25.10.2002 - Regarding Planning, Packages and Scheduling.
(2) ಸುತ್ತೋಲೆ ಸಂ:PWD 1359 So/FC/2002 (P-2) ದಿನಾಂಕ: 25.10.2002.
(3) ಸರ್ಕಾರದ ಆದೇಶ ಸಂ:FD 4 PCL 2008, ದಿನಾಂಕ:14.10.2008.
(4) ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿರವರ ಟಿಪ್ಪಣಿ ಸಂ:PSCM/2282/2022, ದಿನಾಂಕ:29.04.2022.

*****

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999 ಮತ್ತು ನಿಯಮಗಳು, 2000 ರ ಅನ್ವಯ ಮತ್ತು ಅದರಡಿ ಸರ್ಕಾರದಿಂದ ಕಾಲಕಾಲಕ್ಕೆ ನೀಡಲಾಗುವ ಆದೇಶ ಮತ್ತು ಸುತ್ತೋಲೆಗಳನ್ವಯ ರಾಜ್ಯದಲ್ಲಿನ ಎಲ್ಲಾ ಸಂಗ್ರಹಣಾ ಪ್ರಾಧಿಕಾರಗಳು ಟೆಂಡರ್ ಪ್ರಕ್ರಿಯೆಯನ್ನು ಕೈಗೊಂಡು ಗುತ್ತಿಗೆ ವಹಿಸುವುದು ಕಡ್ಡಾಯವಾಗಿರುತ್ತದೆ. ಅದೇ ರೀತಿ ಕರ್ನಾಟಕ ಲೋಕೋಪಯೋಗಿ ಇಲಾಖಾ ಸಂಹಿತೆ ಪ್ಯಾರಾ 202 (10) ರಲ್ಲಿ ಕಾಮಗಾರಿಗಳ ಬಿಲ್ಲುಗಳನ್ನು first come first serve ಆಧಾರದ ಮೇಲೆ ಪಾವತಿ ಮಾಡಲು ತಿಳಿಸಲಾಗಿರುತ್ತದೆ. ಈ ಬಗ್ಗೆ ಕರ್ನಾಟಕ ಸ್ಟೇಟ್ ಕಂಟ್ರಾಕ್ಟರ್ ಅಸೋಸಿಯೇಷನ್‌ನ ಅಧ್ಯಕ್ಷರು ಮತ್ತು ಪದಾಧಿಕಾರಿಗಳೊಂದಿಗೆ ಮಾನ್ಯ ಮುಖ್ಯಮಂತ್ರಿಗಳು ನಡೆಸಿದ ಸಭೆಯಲ್ಲಿ ಚರ್ಚಿಸಲಾಗಿದೆ. ಮಾನ್ಯ ಮುಖ್ಯಮಂತ್ರಿಗಳ ನಿರ್ದೇಶನದಂತೆ ಕಾಮಗಾರಿಗಳ ಟೆಂಡರ್ ಪ್ರಕ್ರಿಯೆ ಮತ್ತು ಬಿಲ್ಲುಗಳ ಪಾವತಿಗೆ ಸಂಬಂಧಿಸಿದಂತೆ ಈ ಕೆಳಗಿನಂತೆ ಸೂಚನೆಗಳನ್ನು ನೀಡಲಾಗಿದೆ:

1. ಉಲ್ಲೇಖ (1) ರ ಸರ್ಕಾರದ ಸುತ್ತೋಲೆಯಲ್ಲಿ ಸಾರ್ವಜನಿಕ ಸಂಗ್ರಹಣೆಗಳ ಪ್ಲ್ಯಾನಿಂಗ್, ಪ್ಯಾಕೇಜಿಂಗ್ ಮತ್ತು ಶೆಡ್ಯೂಲಿಂಗ್ ಹಾಗೂ ಅನುದಾನ ಲಭ್ಯಗೊಳಿಸುವ ಬಗ್ಗೆ ತಿಳಿಸಲಾಗಿದ್ದು, ಕಾರ್ಯಯೋಜನೆಯ ಅನುಷ್ಠಾನವನ್ನು ಗಮನದಲ್ಲಿಟ್ಟುಕೊಂಡು ಪ್ಯಾಕೇಜಿಂಗ್ ಮಾಡುವುದನ್ನು ಪರಿಶೀಲಿಸಲು ತಿಳಿಸಲಾಗಿರುತ್ತದೆ. ಅದರಂತೆ ಪ್ಯಾಕೇಜಿಂಗ್ ಮಾಡುವ ಸಂದರ್ಭದಲ್ಲಿ ತಾಲ್ಲೂಕು ಮಟ್ಟದಲ್ಲಿ ಅನುಷ್ಠಾನಗೊಳಿಸುತ್ತಿರುವ ಕಾಮಗಾರಿಗಳ ಪ್ಯಾಕೇಜ್ ಮೊತ್ತವನ್ನು ಗರಿಷ್ಠ ರೂ.100.00 ಲಕ್ಷಗಳಿಗೆ ಸೀಮಿತಗೊಳಿಸತಕ್ಕದ್ದು.

2. ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999 ರ ಕಲಂ 9 ರ ಅನ್ವಯ ಸಂಗ್ರಹಣಾ ಪ್ರಾಧಿಕಾರವು ಟೆಂಡರ್ ಆಹ್ವಾನಿಸುವ ಮತ್ತು ಅಂಗೀಕರಿಸುವ ಪ್ರಾಧಿಕಾರಗಳನ್ನು ನೇಮಕ ಮಾಡಬೇಕಾಗುತ್ತದೆ. ಈ ರೀತಿ ನೇಮಕಗೊಂಡ ತಾಲ್ಲೂಕು ಮಟ್ಟದ ಪ್ರಾಧಿಕಾರವು ತಾಲ್ಲೂಕು ಹಂತದಲ್ಲಿ, ಜಿಲ್ಲಾ ಮಟ್ಟದ ಪ್ರಾಧಿಕಾರವು ಜಿಲ್ಲಾ ಹಂತದಲ್ಲಿ ಮತ್ತು ರಾಜ್ಯ ಮಟ್ಟದ ಪ್ರಾಧಿಕಾರವು ರಾಜ್ಯಮಟ್ಟದಲ್ಲಿ ಆಯಾ ಸಂಗ್ರಹಣೆಗಳ ಟೆಂಡರ್‌ನ್ನು ಕರೆಯಲು ಕ್ರಮವಹಿಸತಕ್ಕದ್ದು.

3. ಕಾಮಗಾರಿಗಳ ಟೆಂಡರ್ ಪ್ರಕ್ರಿಯೆಗೆ ಸಂಬಂಧಿಸಿದಂತೆ ರಾಜ್ಯ ಸರ್ಕಾರದಿಂದ KW-1 ರಿಂದ KW-6 ರಲ್ಲಿ ಮಾದರಿ ದಾಖಲೆಗಳನ್ನು ನಿಗಧಿಪಡಿಸಿ ಆದೇಶ ಹೊರಡಿಸಲಾಗಿರುತ್ತದೆ. ಕ್ರಮವಾಗಿ ರೂ.50.00 ಲಕ್ಷಗಳಿಂದ ರೂ.100.00 ಲಕ್ಷಗಳವರೆಗೆ ಮತ್ತು ರೂ.100.00 ಲಕ್ಷಗಳನ್ನು ಮೀರಿದ ಅಂದಾಜು ಮೊತ್ತಗಳ ಕಾಮಗಾರಿಗಳಿಗೆ ಸಂಬಂಧಿಸಿದಂತೆ KW-3 ಮತ್ತು KW-4 ರ Clause 3.3(a) ರಲ್ಲಿ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ನಿಯಮಗಳು 28(2)(b) ರನ್ವಯ ಟೆಂಡರುದಾರರಿಗೆ ಯಂತ್ರೋಪಕರಣಗಳ ಸಾಮರ್ಥ್ಯವನ್ನು ನಿಗಧಿಪಡಿಸಲಾಗಿರುತ್ತದೆ. ಪ್ರಸಕ್ತ ಇದನ್ನು ಪರಿಷ್ಕರಿಸಿ ರೂ.300.00 ಲಕ್ಷಗಳವರೆಗಿನ ಅಂದಾಜು ಮೊತ್ತದ ಕಾಮಗಾರಿಗಳಿಗೆ ಸದರಿ clause ನ ಅನ್ವಯಿಕೆಯಿಂದ ವಿನಾಯಿತಿ ನೀಡಲಾಗಿದೆ. ಉಳಿದಂತೆ ಇತರೆ ಎಲ್ಲಾ ಷರತ್ತುಗಳಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ.

4. ಕಾಮಗಾರಿಗಳ ಬಿಲ್ಲುಗಳ ಪಾವತಿಗೆ ಸಂಬಂಧಿಸಿದಂತೆ ಕರ್ನಾಟಕ ಲೋಕೋಪಯೋಗಿ ಇಲಾಖೆ ಸಂಹಿತೆ, ಪ್ಯಾರಾ 202(10) ರಲ್ಲಿ ಬಿಲ್ಲುಗಳ ಪಾವತಿಯನ್ನು first come first serve ಆದಾರದಲ್ಲಿ ಪಾವತಿ ಮಾಡಲು ತಿಳಿಸಲಾಗಿರುತ್ತದೆ. ಇದನ್ನು ಪುನರುಚ್ಚರಿಸುತ್ತಾ, ಕಡ್ಡಾಯವಾಗಿ ಗುತ್ತಿಗೆದಾರರ ಬಿಲ್ಲುಗಳನ್ನು ಅವುಗಳ ಜೇಷ್ಠತೆ ಆಧಾರದಲ್ಲಿ ಪಾವತಿ ಮಾಡಲು ಕ್ರಮವಹಿಸತಕ್ಕದ್ದು.

...3

5. ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಕಾಯಿದೆ. 1999 ರ ಕಲ (6) ಅನ್ವಯ ಎಲ್ಲಾ ಟೆಂಡರ್ ಪ್ರಕ್ರಿಯೆಯನ್ನು ಕಾಯಿದೆ ಮತ್ತು ನಿಯಮಗಳಲ್ಲಿ ನಿಗಧಿಪಡಿಸಿದ ಪ್ರಕ್ರಿಯೆಗೆ ಅನುಸಾರವಾಗಿಯೇ ಕೈಗೊಳ್ಳಬೇಕಾಗಿರುತ್ತದೆ. ಅದೇ ರೀತಿ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ನಿಯಮಗಳು. 2000ರ ನಿಯಮ 21 ರಂತೆ ಟಂಡರ್ ದಾಖಲೆಗಳಲ್ಲಿ ನಿಗಧಿಪಡಿಸಿದ ಮಾನದಂಡಗಳ ಅನ್ವಯವೇ ಕಡ್ಡಾಯವಾಗಿ ಟೆಂಡರ್ ಮೌಲ್ಯ ಮಾಪನವನ್ನು ಕೈಗೊಂಡು ನಿಯಮ (25) ರಂತೆ ಅತ್ಯಂತ ಕಡಿಮೆ ದರ (Lowest Evaluated Price) ನೀಡಿದ ಅರ್ಹ ಟೆಂಡರುದಾರರನ್ನು ಗುರುತಿಸಿ ಗುತ್ತಿಗೆ ನೀಡಬೇಕಾಗುತ್ತದೆ. ಉಲ್ಲೇಖ (2) ರ ಸುತ್ತೋಲೆಯಲ್ಲಿ ಈ ವಿಷಯದ ಕುರಿತು ಸಮಗ್ರವಾಗಿ ವಿವರಿಸಿ ತಾಂತ್ರಿಕವಾಗಿ ಮತ್ತು ವಾಣಿಜ್ಯಾತ್ಮಕವಾಗಿ ಅರ್ಹರಾದ L1 ಟೆಂಡರುದಾರರಿಗೆ ಗುತ್ತಿಗೆ ನೀಡುವಂತೆ ತಿಳಿಸಲಾಗಿರುತ್ತದೆ. ಇದನ್ನು ಮತ್ತಮ್ಮೆ ಪುನರುಚ್ಚರಿಸುತ್ತಾ. ಟೆಂಡರ್ ಪ್ರಕ್ರಿಯೆಯ್ನು ಕಡ್ಡಾಯವಾಗಿ ಕೆ.ಟಿ.ಪಿ.ಪಿ ಕಾಯಿದೆ ಮತ್ತು ನಿಯಮಗಳಲ್ಲಿನ ಅವಕಾಶಗಳ ಅನ್ವಯ ಕೈಗೊಂಡು ಅರ್ಹ L1 ಗುತ್ತಿಗೆದಾರರಿಗೆ ಮಾತ್ರ ಗುತ್ತಿಗೆ ನೀಡಲು ತಿಳಿಸಿದೆ. ಕೆ.ಟಿ.ಪಿ.ಪಿ ಕಾಯಿದೆ ಮತ್ತು ನಿಯಮಗಳಲ್ಲಿ L1 ಟೆಂಡರುದಾರರನ್ನು ಹೊರತುಪಡಿಸಿ ಬೇರೆಯವರಿಗೆ ಗುತ್ತಿಗೆ ನೀಡಲು ಅವಕಾಶವಿರುವುದಿಲ್ಲ ಮತ್ತು ಯಾವುದೇ ಕಾರಣದಿಂದ L1 ಗುತ್ತಿಗೆದಾರರು ಒಪ್ಪಂದ ಮಾಡಿಕೊಳ್ಳದಿದ್ದಲ್ಲಿ ಅಥವಾ ಗುತ್ತಿಗೆ ನಿರ್ವಹಿಸಲು ಮುಂದೆ ಬರದಿದ್ದಲ್ಲಿ. ಅಥವಾ ಯಾವುದೇ ಕಾರಣದಿಂದ ಅನರ್ಹರಾದಲ್ಲಿ, ನಿಯಮಗಳ ಅನುಸಾರ ಅಂತಹ ಟೆಂಡರುದಾರರ EMD ಮೊತ್ತವನ್ನು ಮುಟ್ಟುಗೋಲು ಹಾಕಿಕೊಂಡು. ಕಡ್ಡಾಯವಾಗಿ ಮರುಟೆಂಡರ್ ಕರೆಯಲು ಕ್ರಮವಹಿಸತಕ್ಕದ್ದು ಎಂದು ತಿಳಿಯಪಡಿಸಿದೆ.

6. ಕಾಮಗಾರಿಗಳ ಗುತ್ತಿಗೆಯಲ್ಲಿ ಪಾರದರ್ಶಕವಾದ ಟೆಂಡರ್ ಪ್ರಕ್ರಿಯೆ ಮತ್ತು ಕಾಮಗಾರಿಗಳ ಅನುಷ್ಠಾನ ಮತ್ತು ಬಿಲ್ಲುಗಳ ಜೇಷ್ಠತೆಯ ಕ್ರಮೇಣ ಪಾವತಿಸಲು ತಂತ್ರಾಂಶವನ್ನು ಒಳಗೊಂಡ ವ್ಯವಸ್ಥೆಯೊಂದನ್ನು ರೂಪಿಸಲು ತಿಳಿಸಿದೆ.

(ಐ.ಎಸ್.ಎನ್.ಪ್ರಸಾದ್)
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ
ಆರ್ಥಿಕ ಇಲಾಖೆ

ಇವರಿಗೆ:

ಸರ್ಕಾರದ ಎಲ್ಲಾ ಸಂಗ್ರಹಣಾ ಪ್ರಾಧಿಕಾರಗಳು.

ಕರ್ನಾಟಕ ಸರ್ಕಾರ

ಸಂಖ್ಯೆ: ಆಇ 128 ವೆಚ್ಚ-12/2021

ಕರ್ನಾಟಕ ಸರ್ಕಾರ ಸಚಿವಾಲಯ,
ವಿಧಾನ ಸೌಧ,
ಬೆಂಗಳೂರು, ದಿನಾಂಕ: 10.05.2022

## ಸುತ್ತೋಲೆ

ವಿಷಯ: ಸಾರ್ವಜನಿಕ ಸಂಗ್ರಹಣೆಗಳಲ್ಲಿ ಟೆಂಡರ್ ಲಾಭಾಂಶವನ್ನು (Tender Premium) ಅನ್ನು ಶೇ.5 ಕ್ಕೆ ಮಿತಿಗೊಳಿಸುವ ಕುರಿತು.

ಉಲ್ಲೇಖ: ಸರ್ಕಾರದ ಸುತ್ತೋಲೆ ಸಂಖ್ಯೆ: PWD 1359 SOFC 2001 (P-2), ದಿನಾಂಕ:03.12.2002.

********

ಮೇಲೆ ಉಲ್ಲೇಖಿಸಿದ ಸರ್ಕಾರದ ಸುತ್ತೋಲೆಯಲ್ಲಿ ಟೆಂಡರ್‌ನಲ್ಲಿ ಸ್ವೀಕೃತವಾದ ದರಗಳು ಅಂದಾಜು ಮೊತ್ತಕ್ಕಿಂತ ಶೇ.10 ಕ್ಕಿಂತ ಹೆಚ್ಚಾಗಿದ್ದಲ್ಲಿ, ಅದನ್ನು ಗಣನೀಯ ಹೆಚ್ಚುವರಿ (substantially high) ಟೆಂಡರ್ ಎಂದು ಪರಿಗಣಿಸಲು ಮತ್ತು ಅಂತಹ ಸಂದರ್ಭದಲ್ಲಿ ಎಲ್ಲಾ ಟೆಂಡರುಗಳನ್ನು ರದ್ದುಪಡಿಸಿ ಮರುಟೆಂಡರ್ ಕರೆಯುವುದು ಪ್ರಥಮ ಆಯ್ಕೆಯಾಗಿರಬೇಕೆಂದು ತಿಳಿಸಲಾಗಿರುತ್ತದೆ. ಆದಾಗ್ಯೂ, ಹಲವಾರು ಸಂಗ್ರಹಣಾ ಪ್ರಾಧಿಕಾರಗಳು (Procurement Entities) ಪ್ರಸಕ್ತ ಶೇ.10 ಮತ್ತು ಅದಕ್ಕಿಂತ ಹೆಚ್ಚಿನ ದರಗಳಿಗೆ ಟೆಂಡರ್ ಅನುಮೋದಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಈ ಕುರಿತು ಪರಿಶೀಲಿಸಲಾಗಿ, ಸಾರ್ವಜನಿಕ ಸಂಗ್ರಹಣೆಗಳಲ್ಲಿ ಅಂದಾಜು ಮೊತ್ತದ ಮೇಲೆ ಶೇ.5 ಕ್ಕಿಂತ ಹೆಚ್ಚಿನ ಲಾಭಾಂಶವುಳ್ಳ (Tender Premium) ಟೆಂಡರ್‌ಅನ್ನು ಯಾವುದೇ ಕಾರಣಕ್ಕೂ ಅಂಗೀಕರಿಸತಕ್ಕದ್ದಲ್ಲ ಎಂದು ತಿಳಿಯಪಡಿಸಿದೆ. ಒಂದು ವೇಳೆ ಶೇ.5 ಕ್ಕಿಂತ ಹೆಚ್ಚಿನ ಮೊತ್ತದ ಲಾಭಾಂಶವುಳ್ಳ ಟೆಂಡರ್‌ಅನ್ನು ಅಂಗೀಕರಿಸ ಬಯಸಿದಲ್ಲಿ, ಸಮರ್ಥನೀಯ ಕಾರಣಗಳನ್ನು ಲಿಖಿತ ರೂಪದಲ್ಲಿ ದಾಖಲಿಸಿ, ಉನ್ನತ ಪ್ರಾಧಿಕಾರದ ಅನುಮೋದನೆ ಪಡೆದು ಅಂಗೀಕರಿಸತಕ್ಕದ್ದು.

ಮೇಲಿನ ನಿರ್ದೇಶನವನ್ನು ಕಟ್ಟುನಿಟ್ಟಾಗಿ ಪಾಲನೆ ಮಾಡುವುದನ್ನು ಎಲ್ಲಾ ಸಂಗ್ರಹಣಾ ಪ್ರಾಧಿಕಾರಗಳು ಖಚಿತಪಡಿಸಿಕೊಳ್ಳತಕ್ಕದ್ದು. ಸದರಿ ನಿರ್ದೇಶನದ ಉಲ್ಲಂಘನೆಯು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ, 1999ರ ಕಲಂ (23) ರ ಅನ್ವಯ ದಂಡನಾರ್ಹವಾಗಿರುತ್ತದೆ.

(ಐ.ಎಸ್.ಎನ್.ಪ್ರಸಾದ್)
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ
ಆರ್ಥಿಕ ಇಲಾಖೆ

ಇವರಿಗೆ,
ಸರ್ಕಾರದ ಎಲ್ಲಾ ಸಂಗ್ರಹಣಾ ಪ್ರಾಧಿಕಾರಗಳು.